# ಕರ್ನಾಟಕ ಸರ್ಕಾರ

ಸಂ:ಗ್ರಾಅಪ/23/ಗ.ಕೋಶ/2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:07.09.2018

ಇವರಿಂದ
ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ
ಬೆಂಗಳೂರು.

ಇವರಿಗೆ
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು

ಮಾನ್ಯರೇ,

ವಿಷಯ: ಗ್ರಾಮ ಪಂಚಾಯತ್‌ಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳನ್ನು ಅನುಷ್ಠಾನ ಮಾಡಿರುವ ಬಗ್ಗೆ.
ಉಲ್ಲೇಖ: ಸರ್ಕಾರದ ಪತ್ರ ಸಮ ಸಂಖ್ಯೆ ದಿನಾಂಕ:02.07.2018, 07.08.2018 ಮತ್ತು 31.08.2018

*****

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ದಿನಾಂಕ:05.09.2018 ರಂದು ಚಾಲನೆ ನೀಡಿರುತ್ತಾರೆ. ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳನ್ನು ಅನುಷ್ಠಾನ ಮಾಡಲು ಈಗಾಗಲೇ ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.

ಅದರಂತೆ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಮಟ್ಟದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಗ್ರಾಮ ಪಂಚಾಯತ್‌ಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಕ್ರಮಕೈಗೊಳ್ಳುವುದು.

1. ಗ್ರಾಮ ಪಂಚಾಯತಿಯ ಡಾಟಾ ಎಂಟ್ರಿ ಆಪರೇಟರ್‌ಗಳು ಆಧಾರ್ ತಿದ್ದುಪಡಿ ಮಾಡುವ ಮೊದಲು ಸಾರ್ವಜನಿಕರಿಂದ ಅರ್ಜಿ ನಮೂನೆಯನ್ನು ಭರ್ತಿ ಮಾಡಿಸಿ, ಸದರಿ ನಮೂನೆಯನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಗ್ರಾ.ಪಂ ಕಾರ್ಯದರ್ಶಿ ರವರಿಂದ ದೃಡೀಕರಿಸುವುದು. (ಅರ್ಜಿ ನಮೂನೆಯನ್ನು ಪತ್ರದೊಂದಿಗೆ ಲಗತ್ತಿಸಿದೆ)
2. ಗ್ರಾಮ ಪಂಚಾಯತಿಗಳಲ್ಲಿ ಆಧಾರ್ ತಿದ್ದುಪಡಿಗಾಗಿ ಕನಿಷ್ಠ **4 GB RAM** ಇರುವ ಕಂಪ್ಯೂಟರ್‌ಗಳನ್ನು ಹಾಗೂ HAMSTER PLUS Biometric device ಗಳನ್ನು ಬಳಸಬೇಕು.
3. ಗ್ರಾಮ ಪಂಚಾಯತಿಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ ಗ್ರಾ.ಪಂ ಕಾರ್ಯದರ್ಶಿಯವರು ಸಾರ್ವಜನಿಕರಿಂದ ಭರ್ತಿ ಮಾಡಿದ ಅರ್ಜಿ ನಮೂನೆ ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ದೃಡೀಕರಿಸುವುದು.
4. ಗ್ರಾಮ ಪಂಚಾಯತಿಗಳಲ್ಲಿ ಕಡ್ಡಾಯವಾಗಿ ಆಧಾರ್ ಫಲಕ ಮತ್ತು ಆಧಾರ್ ಶುಲ್ಕದ ಫಲಕಗಳನ್ನು ಅಳವಡಿಸುವುದು. ಈಗಾಗಲೇ ಆಧಾರ್ ಫಲಕ ಮತ್ತು ಆಧಾರ್ ಶುಲ್ಕದ ಫಲಕಗಳ ವಿನ್ಯಾಸವನ್ನು ಕಳುಹಿಸಲಾಗಿದೆ. (ಫಲಕಗಳ ವಿನ್ಯಾಸದ ಪ್ರತಿಯನ್ನು ಮತ್ತೊಮ್ಮೆ ಈ ಪತ್ರದೊಂದಿಗೆ ಲಗತ್ತಿಸಿದೆ).

.....2

5. ಆಧಾರ್ ತಿದ್ದುಪಡಿ ಕೇಂದ್ರಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆಗಾಗಿ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿ ಮತ್ತು ತಾಲ್ಲೂಕು ಪಂಚಾಯತ್‌ನ ಸಹಾಯಕ ನಿರ್ದೇಶಕರುಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.
6. ನೋಡಲ್ ಅಧಿಕಾರಿಗಳು ಗ್ರಾಮ ಪಂಚಾಯತಿಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಬಗ್ಗೆ ಮೇಲ್ವಿಚಾರಣೆ ಮಾಡುವುದು. ಆಧಾರ್ ಶುಲ್ಕದ ಫಲಕವನ್ನು ಅಳವಡಿಸಿರುವುದನ್ನು ಖಚಿತಪಡಿಸುವುದು.
7. ತಾಂತ್ರಿಕ ದೋಷಗಳು ಕಂಡು ಬಂದಲ್ಲಿ ಜಿಲ್ಲಾ ಪಂಚಾಯತಿಯಲ್ಲಿ ಸ್ಥಾಪಿಸಲಾಗಿರುವ ಯೋಜನಾ ಅನುಷ್ಠಾನ ಘಟಕ (PMU) ವನ್ನು (DPM, D-MIS, ADPC, SBM Consultant ಗಳನ್ನೊಳಗೊಂಡಂತೆ) ಸಂಪರ್ಕಿಸುವುದು.
8. ಈಗಾಗಲೇ ಸ್ಥಾಪಿಸಲಾಗಿರುವ ಯೋಜನಾ ಅನುಷ್ಠಾನ ಘಟಕದ ಸಿಬ್ಬಂದಿಗಳಿಗೆ ನಿರ್ಧಿಷ್ಟವಾದ ತಾಲ್ಲೂಕುಗಳನ್ನು ಮೇಲ್ವಿಚಾರಣೆ ಮಾಡಲು ಹಂಚಿಕೆ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸುವುದು.
9. ಗ್ರಾಮ ಪಂಚಾಯತಿಯ ಸಿಬ್ಬಂದಿಗಳಿಗೆ ಸಹಾಯವಾಗುವಂತೆ ಆಧಾರ್ ತಿದ್ದುಪಡಿ ಕೇಂದ್ರಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಎಲ್ಲಾ ಪತ್ರ, ಸುತ್ತೋಲೆ, ಅರ್ಜಿ ನಮೂನೆ (ಕನ್ನಡ ಮತ್ತು ಆಂಗ್ಲ ಅವತರಣಿಕೆ) ಮತ್ತು ಆಧಾರ್ ಫಲಕ ವಿನ್ಯಾಸ ಮತ್ತು ಆಧಾರ್ ಶುಲ್ಕ ಫಲಕದ ವಿನ್ಯಾಸವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ Website ನಲ್ಲಿ ಅಳವಡಿಸಲಾಗಿದೆ.

ಸದರಿ ಪ್ರಕ್ರಿಯೆಯನ್ನು ಕಾಲಕಾಲಕ್ಕೆ ಪರಿಶೀಲಿಸಿ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ಆಧಾರ್ ತಿದ್ದುಪಡಿ ಕೇಂದ್ರಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಲು ಸೂಚಿಸಿದೆ.

ತಮ್ಮ ವಿಶ್ವಾಸಿ,

(ಎನ್.ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು (ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿ.ಆ.ಸು.ಇ (ಇ-ಆಡಳಿತ).
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅಪ ಇವರ ಆಪ್ತ ಕಾರ್ಯದರ್ಶಿಯವರಿಗೆ.
4. ನಿರ್ದೇಶಕರು, ಪಂ.ರಾಜ್-1, ಗ್ರಾಅಪ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು, ಇ-ಆಡಳಿತ ಕೇಂದ್ರ, ಸಿ.ಆ.ಸು.ಇ (ಇ-ಆಡಳಿತ).
6. ಯೋಜನಾ ನಿರ್ದೇಶಕರು, ಯುಇಡಿ & ಕೆ.ಆರ್.ಡಿ.ಹೆಚ್, ಸಿ.ಆ.ಸು.ಇ (ಇ-ಆಡಳಿತ).

ಪ್ರತಿ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಕಾರ್ಯದರ್ಶಿಗಳು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಸಹಾಯಕ ಕಾರ್ಯದರ್ಶಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾಧಿಕಾರಿಗಳು.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಸಹಾಯಕ ನಿರ್ದೇಶಕರುಗಳು.
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.
6. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು, District MIS Co-Ordinator, ADPC & SBM ಸಮಾಲೋಚಕರು.
7. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ MIS Co-Ordinators.
8. ರಾಜ್ಯದ ಎಲ್ಲಾ ಜಿಲ್ಲೆಯ ಆಧಾರ್ ಸಮಾಲೋಚಕರು.

d:\shilpa_2018\imtz\aadhar_t_all.docx